ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಶುಕ್ರವಾರ, ದಿನಾಂಕ: 11ನೇ ಡಿಸೆಂಬರ್, 2020

ಗರ್ಭಿಣಿ, ಬಾಣಂತಿಯರಿಗೆ ಒದಗಿಸುವ ಆಹಾರ ಧಾನ್ಯಗಳಲ್ಲಿನ ಕಲಬೆರಕೆ ಬಗ್ಗೆ

ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :-

489(381) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಅಂಗನವಾಡಿಗಳ ಮೂಲಕ ಗರ್ಭಿಣಿ, ಬಾಣಂತಿಯರಿಗೆ ಪೌಷ್ಟಿಕ ಆಹಾರ ಧಾನ್ಯಗಳನ್ನು ಪೂರೈಸುವ ಸಂಸ್ಥೆಗಳು ಯಾವುವು; (ವಿವರ ಒದಗಿಸುವುದು)

(ಆ) ಕಳೆದ 3 ವರ್ಷಗಳ ಅವಧಿಯಲ್ಲಿ ಪೂರೈಸಲಾದ ಆಹಾರ ಧಾನ್ಯಗಳು, ಒದಗಿಸಲಾದ ಅನುದಾನ, ವೆಚ್ಚ ಎಷ್ಟು ; (ಪ್ರತ್ಯೇಕ ಮಾಹಿತಿಯನ್ನು ವರ್ಷಾವಾರು, ಜಿಲ್ಲಾವಾರು ಒದಗಿಸುವುದು)

(ಇ) ಪೂರೈಕೆಯಾಗುತ್ತಿರುವ ಆಹಾರ ಧಾನ್ಯಗಳು ಕಲಬೆರಕೆ, ಸಮಯಕ್ಕೆ ಸರಿಯಾಗಿ ಪೂರೈಸುವಲ್ಲಿನ ವಿಳಂಬ, ಅವ್ಯವಹಾರಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ; ಹಾಗಿದ್ದಲ್ಲಿ ನ್ಯೂನತೆ ಸರಿಪಡಿಸಲು ಸಂಬಂಧಪಟ್ಟವರ ಮೇಲೆ ಕೈಗೊಂಡ ಕ್ರಮಗಳೇನು? (ಪ್ರತ್ಯೇಕ ಸಂಪೂರ್ಣ ಮಾಹಿತಿ ಒದಗಿಸುವುದು)